ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2018–19 ದಿನಾಂಕ: 20–08–2018

# ಪತ್ರಿಕಾ ಆಮಂತ್ರಣ

1. **Karnataka Stage Logistic Policy – 2018, Joint stakeholder consultative interactive session**.

   Presided by:

   K.J. George,
   Minister for Large and Mega Industries, IT&BT, Sugar, Science and Technology.

   Dated: 21-08-2018, Tuesday, Time : 10.00 AM
   Place: Hotel Taj West end, Race Course Road, Bengaluru – 560 001.

2. ಕರ್ನಾಟಕ ವಿಧಾನ ಸಭೆಯ ಸರ್ಕಾರಿ ಭರವಸೆಗಳ ಸಮಿತಿಯ ಪ್ರಾರಂಭಿಕ ಸಭೆ

   **ಎ.ಟಿ. ರಾಮಸ್ವಾಮಿ,**
   ಅಧ್ಯಕ್ಷರು,

   ದಿನಾಂಕ: 21–08–2018, ಮಂಗಳವಾರ, ಸಮಯ: ಬೆಳಿಗ್ಗೆ: 11.00 ಗಂಟೆಗೆ.
   ಸ್ಥಳ: ಕೊಠಡಿ ಸಂಖ್ಯೆ 106, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು.

3. ಕರ್ನಾಟಕ ವಿಧಾನಮಂಡಲದ 2018–19 ನೇ ಸಾಲಿನ ಗ್ರಂಥಾಲಯ ಸಮಿತಿಯ ಪ್ರಾರಂಭಿಕ ಸಭೆ

ಅಧ್ಯಕ್ಷತೆ:
ಬಸವರಾಜ ಹೊರಟ್ಟಿ, ಸಭಾಧ್ಯಕ್ಷರು, ವಿಧಾನ ಪರಿಷತ್

ದಿನಾಂಕ: 21–08–2018, ಮಂಗಳವಾರ, ಸಮಯ: ಮಧ್ಯಾಹ್ನ 3.00 ಗಂಟೆಗೆ.
ಸ್ಥಳ: ಇ–ಗ್ರಂಥಾಲಯ, ಕೊಠಡಿ ಸಂಖ್ಯೆ : 28, ನೆಲಮಹಡಿ, ವಿಧಾನಸೌಧ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

## ಸದ್ಭಾವನಾ ದಿನಾಚರಣೆ: ಪ್ರತಿಜ್ಞಾವಿಧಿ ಬೋಧನೆ

ಬೆಂಗಳೂರು, ಆಗಸ್ಟ್ 20, (ಕರ್ನಾಟಕ ವಾರ್ತೆ)

ಭಾರತದ ಮಾಜಿ ಪ್ರಧಾನ ಮಂತ್ರಿ ದಿವಂಗತ ರಾಜೀವ್ ಗಾಂಧಿಯವರ ಹುಟ್ಟುಹಬ್ಬದ ದಿನಾಚರಣೆಯ ಅಂಗವಾಗಿ ಇಂದು ದೇಶಾದ್ಯಂತ ಸದ್ಭಾವನಾ ದಿನವನ್ನಾಗಿ ಆಚರಿಸಲಾಗುತ್ತದೆ ಎಂದು ಕನ್ನಡ ಮತ್ತು ಸಂಸ್ಕೃತಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕ ಎನ್.ಆರ್.ವಿಶುಕುಮಾರ್ ಅವರು ಹೇಳಿದರು.

ಇಂದು ಸದ್ಭಾವನಾ ದಿನದ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ನೆರೆದಿದ್ದ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ಪ್ರತಿಜ್ಞಾವಿಧಿ ಬೋಧನೆ ಮಾಡಿ ನಂತರ ಮಾತನಾಡಿದ ಅವರು ಎಲ್ಲಾ ಧರ್ಮ, ಭಾಷೆ ಹಾಗೂ ರಾಜ್ಯಗಳ ಜನರಲ್ಲಿ ಸೌಹಾರ್ದತೆಯನ್ನು ಉತ್ತೇಜಿಸಿ ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ ಹಿಂಸಾಚಾರವನ್ನು ತ್ಯಜಿಸುವಂತೆ ಮಾಡಲು ಕೇಂದ್ರ ಸರ್ಕಾರದ ಆದೇಶದಂತೆ ಆಗಸ್ಟ್ 20 ರಂದು ಸದ್ಭಾವನಾ ದಿನವನ್ನಾಗಿ ದೇಶಾದ್ಯಂತ ಆಚರಿಸಲಾಗುತ್ತಿದೆ ಎಂದರು.

“ ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಬೇಧಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲ ಬೇಧಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇನೆಂದು ಸಹ ಪ್ರತಿಜ್ಞಾ ಮಾಡುತ್ತೇನೆ” ಎಂದು ಸದ್ಭಾವನಾ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಇದೇ ಸಂದರ್ಭದಲ್ಲಿ ಅವರು ಭಾರತದ ಮಾಜಿ ಪ್ರಧಾನಮಂತ್ರಿ ದಿವಂಗತ ರಾಜೀವ್ ಗಾಂಧಿಯವರ ಕಾರ್ಯದಕ್ಷತೆ, ಕೊಡುಗೆ ಹಾಗೂ ದೇಶಕ್ಕಾಗಿ ಅವರ ಅವಧಿಯಲ್ಲಿ ನಡೆದ ಉತ್ತಮ ಸಾಧನೆಗಳನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಸಂಖ್ಯೆ

# **ಅರ್ಜಿ ಆಹ್ವಾನ**

ಬೆಂಗಳೂರು, ಆಗಸ್ಟ್ 20, (ಕರ್ನಾಟಕ ವಾರ್ತೆ)

2018-19 ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯಲ್ಲಿ ಕೌಶಲ್ಯ ಅಬಿವೃಧಿ ಕಾರ್ಯಕ್ರಮದಡಿಯಲ್ಲಿ 6 ದಿನಗಳ ಜೇನು ಸಾಕಾಣಿಕೆ/ಅಣಬೆ ಬೇಸಾಯ/ಜೈವಿಕ ಗೊಬ್ಬರಗಳ ಉತ್ಪಾದನೆ ಕುರಿತಂತೆ ತರಬೇತಿಗಾಗಿ ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಆಸಕ್ತ ಅಭ್ಯರ್ಥಿಗಳು ಕನಿಷ್ಠ 5 ನೇ ತರಗತಿ ತೇರ್ಗಡೆಯಾಗಿರಬೇಕು ಕನ್ನಡ ಓದುವುದು, ಬರೆಯುವುದು ಮತ್ತು ಮಾಡನಾಡುವುದು ತಿಳಿದಿರಬೇಕು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 35 ವರ್ಷ ಮತ್ತು ಇತರರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 33 ವರ್ಷ.

ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆಮತ್ತು ಜೀವನೋಪಾಯ ಇಲಾಖೆ ಅವರ ಅಧಿಕೃತ ವೆಬ್‌ಸೈಟ್‌ನಲ್ಲಿ ತೋಟಗಾರಿಕೆ ತರಬೇತಿಗಾಗಿ ದಾಖಲಿಸಿರುವ ಅಭ್ಯರ್ಥಿಗಳಿಗೆ ಮತ್ತು ರೈತ ಮಕ್ಕಳಿಗೆ ಆದ್ಯತೆ ನೀಡಲಾಗುವುದು.

ಅಭ್ಯರ್ಥಿಗಳನ್ನು ಜೇಷ್ಠತೆ ಆಧಾರದ ಮೇಲೆ ತರಬೇತಿ ಪ್ರವೇಶವನ್ನು ನೀಡಲಾಗುವುದು.

ಅರ್ಜಿಗಳನ್ನು ಸಹಾಯಕ ತೋಟಗಾರಿಕೆ ನಿರ್ದೇಶಕರು, ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು ಅಥವಾ ಇಲಾಖಾವೆಬ್‌ಸೈಟ್ www.horticulture.kar.nic.in ನಲ್ಲಿ ದಿನಾಂಕ: 20–08–2018 ರಿಂದ 25–08–2018 ರವರೆಗೆ ಪಡೆಯಬಹುದಾಗಿರುತ್ತದೆ.

ಅಭ್ಯರ್ಥಿಗಳ ಅರ್ಜಿ ಪರಿಶೀಲನೆ ಮತ್ತು ಆಯ್ಕೆಪಟ್ಟಿ ಪ್ರಕಟಿಸುವ ದಿನಾಂಕ: 27–08–2018.

ಭರ್ತಿಮಾಡಿದ ಅರ್ಜಿಗಳನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ದಿನಾಂಕ: 25–08–2018 ರಂದು ಸಂಜೆ 5.30 ಗಂಟೆಯೊಳಗೆ ಸಹಾಯಕ ತೋಟಗಾರಿಕೆ ನಿರ್ದೇಶಕರು, ತರಬೇತಿ ಕೇಂದ್ರ, ಲಾಲ್‌ಬಾಗ್, ಬೆಂಗಳೂರು ರವರ ಕಚೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಣಿ ಸಂಖ್ಯೆ 080–26564538, 9071280906 ಮತ್ತು 9845549545 ಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ

# ದಿ. ದೇವರಾಜ ಅರಸು ಅವರ ಪ್ರತಿಮೆಗೆ ಮಾಲಾರ್ಪಣೆ

ಬೆಂಗಳೂರು, ಆಗಸ್ಟ್ 20, (ಕರ್ನಾಟಕ ವಾರ್ತೆ)

ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರ 103ನೇ ಜನ್ಮ ದಿನಾಚರಣೆ ಅಂಗವಾಗಿ ವಿಧಾನಸೌಧದ ಆವರಣದಲ್ಲಿರುವ ಅವರ ಪ್ರತಿಮೆಗೆ ಸಹಕಾರ ಸಚಿವರಾದ ಬಂಡೆಪ್ಪ ಕಾಶಂಪೂರ್ ಅವರು ಇಂದು ಮಾಲಾರ್ಪಣೆ ಮಾಡುವ ಮೂಲಕ ಗೌರವ ಸಲ್ಲಿಸಿದರು.

ದಿವಂಗತ ದೇವರಾಜ ಅರಸು ಅವರು ಹಿಂದುಳಿದ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಜನರ ಸಬಲೀಕರಣಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದ ಪ್ರಭಾವಿ ನಾಯಕರು ಎಂದು ಬಣ್ಣಿಸಿದರು.

ಮಾಹಿತಿ ತಂತ್ರಜ್ಞಾನ ಕ್ಷೇತ್ರದ ಅಭಿವೃದ್ಧಿ ಕಲ್ಪನೆ ಈ ಹಿಂದೆಯೇ ಅರಸು ಅವರ ಕಾಲದಲ್ಲೇ ಮೂಡಿಬಂದಿತ್ತು. ಹಿಂದುಳಿದ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ನಾಯಕರು ಇಂದು ರಾಜಕಾರಣದಲ್ಲಿ ಎತ್ತರ ಸ್ಥಾನದಲ್ಲಿದ್ದರೆ ಅದು ದೇವರಾಜ ಅರಸು ಅವರ ಕೊಡುಗೆ ಎಂದು ಸಹಕಾರ ಸಚಿವರು ತಿಳಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಪುಟ್ಟರಂಗ ಶೆಟ್ಟಿ, ವಿಧಾನ ಪರಿಷತ್ ಸದಸ್ಯರಾದ ಲೇಹರ್ ಸಿಂಗ್, ರಾಜ್ಯದ ಮುಖ್ಯ ಕಾರ್ಯದರ್ಶಿ ವಿಜಯಭಾಸ್ಕರ್, ಸರ್ಕಾರದ ಹಿರಿಯ ಅದಿಕಾರಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಜರಿದ್ದರು.

ಸಂಖ್ಯೆ

## ಪ್ರತಿಜ್ಞಾವಿಧಿ ಬೋಧನೆ

ಬೆಂಗಳೂರು, ಆಗಸ್ಟ್ 20, (ಕರ್ನಾಟಕ ವಾರ್ತೆ)

ಭಾರತದ ಮಾಜಿ ಪ್ರಧಾನ ಮಂತ್ರಿಗಳಾದ ದಿ. ರಾಜೀವ್ ಗಾಂಧಿ ಅವರ ಜನ್ಮ ದಿನದ ಅಂಗವಾಗಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಏರ್ಪಡಿಸಿದ್ದ ಸದ್ಭಾವನಾ ದಿನದ ಸರಳ ಕಾರ್ಯಕ್ರಮದಲ್ಲಿ ಸಹಕಾರ ಸಚಿವ ಬಂಡೆಪ್ಪ ಕಾಶಂಪೂರ್ ಅವರು ಸಚಿವಾಲಯದ ಅದಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರಾದ ಸಿ. ಪುಟ್ಟರಂಗ ಶೆಟ್ಟಿ, ರಾಜ್ಯದ ಮುಖ್ಯ ಕಾರ್ಯದರ್ಶಿ ವಿಜಯಭಾಸ್ಕರ್, ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳು, ಸಚಿವಾಲಯದ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಸಂಖ್ಯೆ

# ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 20, (ಕರ್ನಾಟಕ ವಾರ್ತೆ)

ಕೃಷಿ ಸಚಿವ ಎನ್. ಹೆಚ್. ಶಿವಶಂಕರ ರೆಡ್ಡಿ ಅವರು ಆಗಸ್ಟ್ 26 ಮತ್ತು 27 ರಂದು ಚಾಮರಾಜನಗರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಸರ್ಕಾರದ ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿರುವ ಸಚಿವರು ಆಗಸ್ಟ್ 27 ರಂದು ನಗರಕ್ಕೆ ಹಿಂದಿರುಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ

# ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 20, (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಜಲಸಂಪನ್ಮೂಲ ಇಲಾಖೆಯ ಸಹಾಯಕ ಅಭಿಯಂತರರ (ಸಿವಿಲ್) ಹುದ್ದೆಗಳಿಗೆ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ: 20–08–2018 ರಂದು ಆಯೋಗದ ವೆಬ್‌ಸೈಟ್ "http://kpsc.kar.nic.in/Selection Lists" ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಸದರಿ ಆಯ್ಕೆಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು ದಿನಾಂಕ: 27–08–2018 ರೊಳಗೆ (ಕಚೇರಿ ವೇಳೆಯಲ್ಲಿ) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ತಲುಪುವಂತೆ ಸಲ್ಲಿಸಬಹುದಾಗಿದೆ. ನಿಗಧಿಪಡಿಸಿದ ದಿನಾಂಕದ ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

**6435 ಟಿಕೆಟ್ ರಹಿತ ಪ್ರಯಾಣಿಕರಿಂದ 10,25,240/– ರೂ. ದಂಡ ವಸೂಲಿ**

ಬೆಂಗಳೂರು, ಆಗಸ್ಟ್ 20, (ಕರ್ನಾಟಕ ವಾರ್ತೆ)

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವಾಹನಗಳಲ್ಲಿ ಸಂಚರಿಸುವ ಪ್ರಯಾಣಿಕರು ಟಿಕೇಟನ್ನು ಪಡೆಯದೆ ಅನಧಿಕೃತವಾಗಿ ಪ್ರಯಾಣ ಮಾಡುವವರನ್ನು ಮತ್ತು ಸಂಸ್ಥೆಯ ಸಾರಿಗೆ ಆದಾಯದ ಸೋರಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ನಗರದಾದ್ಯಂತ ಸಂಚರಿಸುವ ವಾಹನಗಳನ್ನು ನಮ್ಮ ಸಂಸ್ಥೆಯ ತನಿಖಾ ತಂಡಗಳು ಜುಲೈ-2018 ರಲ್ಲಿ ಒಟ್ಟು 23393 ಟ್ರಿಪ್‍ಗಳನ್ನು ತಪಾಸಿಸಿ 6435 ಟಿಕೇಟ್ ರಹಿತ ಪ್ರಯಾಣಿಕರನ್ನು ಪತ್ತೆಹಚ್ಚಿ ಅವರಿಂದ ಒಟ್ಟು ರೂ.10,25,240/- ದಂಡ ವಸೂಲಿ ಮಾಡಿ ಸಂಸ್ಥೆಯ ನಿರ್ವಾಹಕರುಗಳ ಮೇಲೆ 2555 ಪ್ರಕರಣಗಳನ್ನು ದಾಖಲಿಸಿರುತ್ತಾರೆ.

ಮಹಿಳಾ ಪ್ರಯಾಣಿಕರಿಗೆಂದೆ ಮೀಸಲಾಗಿರುವ ಆಸನಗಳಲ್ಲಿ ಕುಳಿತು ಪ್ರಯಾಣಿಸಿರುವ 617 ಪುರುಷ ಪ್ರಯಾಣಿಕರಿಂದ ಒಟ್ಟು ರೂ. 61,700/- ಗಳನ್ನು ಮೋಟಾರು ವಾಹನ ಕಾಯ್ದೆ 1988 ಕಲಂ 177 ಮತ್ತು 94 ರ ಪ್ರಕಾರ ದಂಡ ವಿಧಿಸಲಾಗಿರುತ್ತದೆ.

ಪ್ರಯಾಣಿಕರು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವಾಗ ಅಧಿಕೃತ ಟಿಕೇಟ್ / ದಿನದ ಪಾಸು / ಮಾಸಿಕ ಪಾಸುಗಳನ್ನು ಹೊಂದಿ ಪ್ರಯಾಣಿಸುವುದು. ಇದರಿಂದ ಅನಗತ್ಯ ದಂಡ ಕಟ್ಟುವುದನ್ನು ತಡೆಯಬಹುದಾಗಿದೆ ಹಾಗೂ ಇಂತಹ ಪ್ರವೃತ್ತಿಯಿಂದ ಸಂಸ್ಥೆಯು ಉತ್ತಮ ಸೇವೆಯನ್ನು ಪ್ರಯಾಣಿಕರಿಗೆ ನೀಡಲು ಸಹಾಯವಾಗುತ್ತದೆ. ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಪುರುಷ ಪ್ರಯಾಣಿಕರು ಆಸನಗಳನ್ನು ತೆರವು ಮಾಡಿಕೊಡುವ ಮೂಲಕ ಅವರಿಗೆ ಕುಳಿತುಕೊಳ್ಳಲು ಅವಕಾಶ ನೀಡಬೇಕೆಂದು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಿದೆ.

## ಕಂದಾಯ ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 20, (ಕರ್ನಾಟಕ ವಾರ್ತೆ)

ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಆರ್.ವಿ.ದೇಶಪಾಂಡೆಯವರು ಆಗಸ್ಟ್ 22 ರಂದು ಧಾರವಾಡ, ಗದಗ ಹಾಗೂ ಕೊಪ್ಪಳ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಅಂದೇ ಬೆಂಗಳೂರಿಗೆ ಹಿಂತಿರುಗಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಟೋಮ್ಯೋಟೊ ಬೆಳೆಯಲ್ಲಿ ಹಣ್ಣು ಕೊರೆಯುವ ಹುಳು ಮತ್ತು ಅಂಗಮಾರಿ ರೋಗ ಹತೋಟಿ ಕ್ರಮಗಳು

ಬೆಂಗಳೂರು, ಆಗಸ್ಟ್ 20, (ಕರ್ನಾಟಕ ವಾರ್ತೆ)

ಟೋಮ್ಯೋಟೊ ಹಣ್ಣು ಕೊರೆಯುವ ಹುಳು ಮೊದಲ ಹಂತದಲ್ಲಿ ಮರಿ ಹುಳುಗಳು ಹೂವಿನ ಮೊಗ್ಗನ್ನು ಮತ್ತು ಹೂವನ್ನು ತಿನ್ನುತ್ತವೆ. ನಂತರ ಮರಿ ಹುಳುಗಳು ಹಣ್ಣನ್ನು ಕೊರೆದು ಒಳ ಭಾಗವನ್ನು ತಿನ್ನುತ್ತವೆ

**ನಿರ್ವಹಣಾ ಕ್ರಮಗಳು:**

- ಪ್ರತಿ ಎರಡು ಸಾಲುಗಳ ಮಧ್ಯೆ ಒಂದು ಸಾಲು ಮೂಲಂಗಿ ಬೆಳೆಯನ್ನು ಅಂತರ ಬೆಳೆಯಾಗಿ ಬೆಳೆಯುವುದರಿಂದ ಹಣ್ಣು ಕೊರಕ ಭಾದೆ ಕಡಿಮೆಯಾಗುತ್ತದೆ.
- 25 ಸಾಲು ಟೊಮ್ಯಾಟೊ ನಂತರ 1 ಸಾಲು ಚೆಂಡು ಹೂ ಬೆಳೆಯುವುದರಿಂದ ಶೇ.10 ರಷ್ಟು ಬಾಧೆಯವರೆಗೂ ಯಾವುದೇ ಸಿಂಪರಣೆ ಅವಶ್ಯವಿರುವುದಿಲ್ಲ. ನಂತರ ಎನ್.ಪಿ.ವಿ. (250 ಎಲ್.ಇ ಪ್ರತಿ ಹೆಕ್ಟೇರಿಗೆ) ದ್ರಾವಣವನ್ನು ಬೆಳೆಗೆ ಸಿಂಪಡಿಸಬೇಕು.
- ಕ್ಲೋರಾಂಥ್ರನಿಲಿಪ್ರೋಲ್ (ಕೋರಜೆನ್) 18.5ಎಂ.ಸಿ0. 3ಮಿ.ಲೀ ಅಥವಾ ಲ್ಯಾಂಬ್ಡಾಸಯಲೋಥಿನ್ (ಕರಾಟೆ) 5ಇ.ಸಿ. 0.5 ಮಿ.ಲೀ. ಅಥವಾ ಕ್ವಿನಾಲ್‌ಫಾಸ್ 25ಇ.ಸಿ 2 ಮಿ.ಲೀ ಪ್ರತಿ ಒಂದು ಲೀಟರ್ ನೀರಿಗೆ ಬೆರಸಿ ಸಿಂಪಡಿಸಬೇಕು



**ಅಂಗಮಾರಿ ರೋಗ:** ಸಣ್ಣ ಸಣ್ಣ ಕಂದು ಬಣ್ಣದ ಚುಕ್ಕೆಗಳು ಎಲೆಯ ಮೇಲ್ಭಾಗದಲ್ಲಿ ಕಾಣಿಸಿಕೊಳುತ್ತವೆ. ಈ ಚುಕ್ಕೆಗಳು ವಕ್ರಾಕಾರದ ಕಂದು ಕಪ್ಪು ಮಿಶ್ರಿತ ಚುಕ್ಕೆಗಳಾಗಿ ನಂತರ ಒಂದಕ್ಕೊಂದು ಸೇರಿಕೊಂಡು ಎಲೆಗಳು ಒಣಗುತ್ತವೆ.

**ನಿರ್ವಹಣ ಕ್ರಮಗಳು:**

ರೋಗವು ಕಂಡ ತಕ್ಷಣ ಹೆಕ್ಸಾಕೋನಜೋಲ್ 5ಇ.ಸಿ 1 ಮಿ.ಲೀ ಅಥವಾ 3 ಗ್ರಾಂ ದೊಡೀನ್ ಅಥವಾ 2 ಗ್ರಾಂ ಮ್ಯಾಂಕೋಜೆಬ್ ಅಥವಾ 2.5 ಗ್ರಾಂ ಕ್ಯುಪ್ರಸ್‌ಆಕ್ಸೈಡ್ ನ್ನು ಪ್ರತಿ ಲೀಟರ್ ನೀರಿನಲ್ಲಿ ಬೆರಸಿ 15 ದಿನಗಳ ಅಂತರದಲ್ಲಿ ಎರಡು ಬಾರಿ ಸಿಂಪರಣೆ ಮಾಡಬೇಕು.



ತೋಟಗಾರಿಕೆ ಬೆಳೆಗಳ ಮಾಹಿತಿಗಾಗಿ ಹಾರ್ಟಿ ಕ್ಲಿನಿಕ್, ತೋಟಗಾರಿಕೆ ಮಾಹಿತಿ ಕೇಂದ್ರ. ದೂರವಾಣಿ ಸಂಖ್ಯೆ: 080-26577997 ಯನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.